
# ಶೀಘ್ರ ಸುಪ್ರೀಂಗೆ ಮೀಸಲು ವರದಿ

## ಹೆಚ್ಚಳ ಸಂಬಂಧ ಅಭಿಪ್ರಾಯ ಕೇಳಿದ್ದ ಕೋರ್ಟ್

ಬೆಂಗಳೂರು: ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಸಂವಿಧಾನಾತ್ಮಕವಾಗಿ ರಕ್ಷಿಸುವ ಕುರಿತು ಕೂಲಂಕಷವಾಗಿ ಪರಾಮರ್ಶಿಸಿ ಅಂತಿಮವಾಗಿ ಮಾ.23ರ ಒಳಗೆ ಸುಪ್ರೀಂಕೋರ್ಟ್‌ಗೆ ವರದಿ ಸಲ್ಲಿಸಲಾಗುವುದು ಎಂದು ಗೃಹ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.



ಮಹಾರಾಷ್ಟ್ರ ಸರ್ಕಾರ ಮೀಸಲು ಪ್ರಮಾಣವನ್ನು ಶೇ. 50ಕ್ಕಿಂತಲೂ ಹೆಚ್ಚು ಮಾಡಿದೆ. ಈ ಪ್ರಕರಣದ ವಿಚಾರಣೆಯನ್ನು ಸುಪ್ರೀಂಕೋರ್ಟ್ ಕೈಗೆತ್ತಿಕೊಂಡಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡುವ ಹಾಗೂ ಪ್ರಕರಣದ ವಿಚಾರಣೆಯನ್ನು ಉನ್ನತ ಪೀಠಕ್ಕೆ ವರ್ಗಾವಣೆ ಮಾಡುವ ಕುರಿತು ಸುಪ್ರೀಂಕೋರ್ಟ್ ಎಲ್ಲ ರಾಜ್ಯಗಳ ಅಭಿಪ್ರಾಯ ಕೇಳಿದೆ. ಈ ಹಿನ್ನೆಲೆಯಲ್ಲಿ ರವಿವಾರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಬಸವರಾಜ ಬೊಮ್ಮಾಯಿ ಅಧ್ಯಕ್ಷತೆಯಲ್ಲಿ ಮಹತ್ವದ ಸಭೆ ನಡೆಯಿತು.

ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಬಸವರಾಜ ಬೊಮ್ಮಾಯಿ, ಮಾ. 23ರ ಒಳಗೆ ಸುಪ್ರೀಂಕೋರ್ಟ್ ಕೇಳಿರುವ ಪ್ರಶ್ನೆ ಮತ್ತು ಇತರ ಮೀಸಲಾತಿ ವಿಚಾರಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ತನ್ನ ನಿಲುವನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಕಟಿಸಲಿದೆ ಎಂದು ಹೇಳಿದರು.

ಇಂದಿರಾ ಸಹಾನಿ ಪ್ರಕರಣದಲ್ಲಿ ಮೀಸಲಾತಿ ಪ್ರಮಾಣ ಶೇ. 50 ಮೀರಬಾರದು ಎಂದು ಸುಪ್ರೀಂಕೋರ್ಟ್ ಆದೇಶಿಸಿದೆ. ಆದರೆ, ಕೆಲ ತಿದ್ದುಪಡಿಗಳಿಂದ ಈ ಪ್ರಮಾಣ ಹೆಚ್ಚಿಸಲು ರಾಜ್ಯ ಸರ್ಕಾರಗಳಿಗೆ ಅಧಿಕಾರ ಇದೆ. ಈ ಅಧಿಕಾರವನ್ನು ಹೇಗೆ ರಕ್ಷಿಸಬೇಕು ಎಂಬುದು ಸೇರಿದಂತೆ ಹಲವು ಮಹತ್ವದ ಪ್ರಶ್ನೆಗಳನ್ನು ಸುಪ್ರೀಂಕೋರ್ಟ್ ಕೇಳಿದೆ. ಈ ಬಗ್ಗೆ ಸಭೆಯಲ್ಲಿ ವಿಸ್ತೃತ ಚರ್ಚೆ ಮಾಡಿದ್ದೇವೆ. ತಜ್ಞರ ಅಭಿಪ್ರಾಯ ದಾಖಲಿಸಿದ್ದೇವೆ ಎಂದು ಮಾಹಿತಿ ನೀಡಿದರು.

ಕುಮಾರಕೃಪಾ ಅತಿಥಿಗೃಹದಲ್ಲಿ ನಡೆದ ಸಭೆಯಲ್ಲಿ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗಡೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ರವಿ ಮಹೇಶ್, ಅಡ್ವೊಕೇಟ್ ಜನರಲ್ ಪ್ರಭುಲಿಂಗ ನಾವದಗಿ, ನಿವೃತ್ತ ನ್ಯಾ. ಕೆ.ಎಲ್. ಮಂಜುನಾಥ ಸೇರಿ ಇತರ ಕಾನೂನು ತಜ್ಞರು, ಮಾಜಿ ಅಡ್ವೊಕೇಟ್ ಜನರಲ್‌ಗಳು ಭಾಗಿಯಾಗಿದ್ದರು.